ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 115 (135)

2) ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 21-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	2019-20 ಹಾಗೂ 2020-21ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಜೀವಹಾನಿಯ ಪ್ರಕರಣಗಳ ಸಂಖ್ಯೆ ಎಷ್ಟು; (ಪ್ರಕರಣವಾರು ಸಂಪೂರ್ಣ ವಿವರ ನೀಡುವುದು)	2019-20 ಹಾಗೂ 2020-21ನೇ ಸಾಲಿನಲ್ಲಿ ಕೊಡಗು ಜಿಲ್ಲೆಯಲ್ಲಿ ಕಾಡು ಪ್ರಾಣಿಗಳ ದಾಳಿಯಿಂದ ಉಂಟಾಗಿರುವ ಮಾನವ-ಪ್ರಾಣಹಾನಿ ಪ್ರಕರಣಗಳ ವಿವರ ಈ ಕೆಳಕಂಡಂತಿದೆ:

ಕ್ರ.ಸಂ	ವಿಭಾಗ	ದಿನಾಂಕ	ಮೃತಪಟ್ಟವರ ಹೆಸರು	ವಿಳಾಸ
		2019-2020		
1	ಮಡಿಕೇರಿ ವನ್ಯಜೀವಿ	03.05.2019	ಶ್ರೀಮತಿ ಸುಧಾ ಕುಟ್ಟಪ್ಪ	ಕಾಂಬುಮನೆ ಗ್ರಾಮ, ವಿರಾಜಪೇಟೆ ತಾಲ್ಲೂಕು
		21.11.2019	ಶ್ರೀ ಕಂಡಾ	ಕುಟ್ಟಗ್ರಾಮ, ವಿರಾಜಪೇಟೆ ತಾಲ್ಲೂಕು
2	ವಿರಾಜಪೇಟೆ	08.08.2019	ಶ್ರೀ ಮುರುವಯ್ಯ	ಚೆನ್ನಯ್ಯನಕೋಟೆ ಗ್ರಾಮ, ತಿತಿಮತಿ ವಲಯ
		28.03.2020	ಶ್ರೀ ಪೋಡಿ ಎರವರ ರಾಜು	ಕುಮಟೂರು ಗ್ರಾಮ, ಪೊನ್ನಂಪೇಟೆ ವಲಯ
3	ಮಡಿಕೇರಿ	06.09.2019	ಶ್ರೀ ಟಿ.ಸಿ.ಚೆನ್ನಕೇಶವ	ಕಡಗದಾಳು ಗ್ರಾಮ, ಮಡಿಕೇರಿ
		07.02.2020	ಶ್ರೀ ಪಮ್ಮಯ್ಯ	ಕರಡಿಗೋಡು ಗ್ರಾಮ, ಕುಶಾಲನಗರ ವಲಯ
		2020-2021 (ಆಗಸ್ಟ್ ಅಂತ್ಯದವರೆಗೆ)		
1	ಮಡಿಕೇರಿ (ಪ್ರಾ.)	11.04.2020	ಶ್ರೀ ಎಂ.ಸಿ.ಲೋಕೇಶ	ರಂಗಸಮುದ್ರ ಗ್ರಾಮ, ಸೋಮವಾರಪೇಟೆ ತಾಲ್ಲೂಕು
		15.06.2020	ಶ್ರೀ ಕುಡಿಯರಚಿಣ್ಣಪ್ಪ	ಯವಕಪಾಡಿ ಗ್ರಾಮ, ಮಡಿಕೇರಿ
		15.08.2020	ಶ್ರೀಮತಿ ಲೀನಾ ಮುತ್ತಣ್ಣ	ಮೊದೂರು ಗ್ರಾಮ, ಸೋಮವಾರಪೇಟೆ
2	ವಿರಾಜಪೇಟೆ	04.07.2020	ಶ್ರೀ ಪೋಡಿ ಎರವರ ಮಾದ	ಕೊಳತ್ತೋಡು ಬೈಗೋಡು, ವಿರಾಜಪೇಟೆ
3	ನಾಗರಹೊಳೆ	25.05.2020	ಶ್ರೀ ಜಗದೀಶ	ನೇರಳಕುಪ್ಪೆ ಹಾಡಿ, ನಾಗರಹೊಳೆ

ಆ)	ಸದರಿ ಪ್ರಕರಣಗಳಲ್ಲಿ ಮೃತರಾದ ವ್ಯಕ್ತಿಯ ಅವಲಂಬಿತರಿಗೆ ಸರ್ಕಾರದಿಂದ ದೊರೆತಿರುವ ಪರಿಹಾರಗಳೇನು:	ವನ್ಯಪ್ರಾಣಿ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳಲ್ಲಿ ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010, ದಿನಾಂಕ: 03.08.2011 ರನ್ವಯ ರೂ.5.00 ಲಕ್ಷಗಳನ್ನು ಮೃತಪಟ್ಟ ವಾರಸುದಾರರಿಗೆ ಪಾವತಿಸಲಾಗಿರುತ್ತದೆ. ಪ್ರಸ್ತುತ, ಸರ್ಕಾರದ ಆದೇಶ ಸಂಖ್ಯೆ: ಅಪಜೀ 66 ಎಫ್‌ಡಬ್ಲ್ಯೂಎಲ್ 2019, ದಿನಾಂಕ: 07.01.2020 ರನ್ವಯ ವನ್ಯಪ್ರಾಣಿಗಳಿಂದ ಮೃತಪಟ್ಟಿರುವ ವ್ಯಕ್ತಿಯ ವಾರಸುದಾರರಿಗೆ ಈಗಾಗಲೇ ಪಾವತಿಸಲಾಗುತ್ತಿದ್ದ ರೂ.5.00.000/-ಗಳ ದಯಾತ್ಮಕ ಧನವನ್ನು ರೂ.7.50.000/-ಗಳಿಗೆ ಹೆಚ್ಚಿಸಲಾಗಿದ್ದು, ಅದರಂತೆ ನಿಯಮಾನುಸಾರ ಪರಿಶೀಲಿಸಿ ಪಾವತಿಸಲಾಗುತ್ತಿದೆ. ಅಲ್ಲದೆ, ಸರ್ಕಾರದ ಆದೇಶ ಸಂಖ್ಯೆ: ಅಪಜೀ 61 ಎಫ್‌ಎಪಿ 2018, ದಿನಾಂಕ: 16.10.2018 ರನ್ವಯ ಮೃತರ ಕುಟುಂಬದ ವಾರಸುದಾರರಿಗೆ 05 ವರ್ಷಗಳವರೆಗೆ ರೂ.2.000/-ಗಳ ಮಾಸಾಶನವನ್ನು ಸಹ ನೀಡಲಾಗುತ್ತಿದೆ.
ಇ)	ಸದರಿ ಫಲಾನುಭವಿಗಳಿಗೆ ಪರಿಹಾರ ನೀಡುವಲ್ಲಿ ಅನಾವಶ್ಯಕ ವಿಳಂಬ ಆಗಿದೆಯೇ; ಆಗಿದ್ದಲ್ಲಿ, ಸದರಿ ವಿಳಂಬಕ್ಕೆ ಕಾರಣಗಳೇನು? (ಸಂಪೂರ್ಣ ವಿವರ ನೀಡುವುದು)	ವಿರಾಜಪೇಟೆ ವಿಭಾಗದ ಪೊನ್ನಂಪೇಟೆ ವಲಯ ಕುಮಟೂರು ಗ್ರಾಮದ ಶ್ರೀ ಪಣಿ ಎರವರ ರಾಜು ಎಂಬುವವರು ದಿನಾಂಕ: 28.03.2020 ರಂದು ಕಾಡೆಮ್ಮೆ ದಾಳಿಯಿಂದ ಮೃತಪಟ್ಟಿರುವ ಪ್ರಕರಣದಲ್ಲಿ ಮೃತ ವ್ಯಕ್ತಿಯ ವಾರಸುದಾರರಿಗೆ ದಯಾತ್ಮಕ ಧನ ಪಾವತಿಸುವ ಬಗ್ಗೆ ಗೊಂದಲವಿರುವ ಕಾರಣ ಕೆಲವೊಂದು ದಾಖಲಾತಿಗಳನ್ನು ಒದಗಿಸುವಂತೆ ಕೋರಿದ್ದು, ಸದರಿ ದಾಖಲಾತಿಗಳು ಸ್ವೀಕೃತವಾದ ಕೂಡಲೇ ನಿಯಮಾನುಸಾರ ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳಲಾಗುವುದು. ವಿರಾಜಪೇಟೆ ವಿಭಾಗ, ವಿರಾಜಪೇಟೆ ವಲಯದ ಕೊಳತ್ತೋಡು ಬೈಗೋಡು ಗ್ರಾಮದ ಶ್ರೀ ಪಣಿ ಎರವರ ಮಾದ ರವರು ದಿನಾಂಕ: 04.07.2020 ರಂದು ಕಾಡಾನೆ ದಾಳಿಯಿಂದ ಮೃತಪಟ್ಟಿದ್ದು, ಸದರಿಯವರ ವಾರಸುದಾರರಿಗೆ ನಿಯಮಾನುಸಾರ ದಯಾತ್ಮಕ ಧನವನ್ನು ಖಜಾನೆ-2 ತಂತ್ರಾಂಶದ ಮೂಲಕ ಬಿಲ್ ತಯಾರಿಸಿ ಬ್ಯಾಂಕ್ ಖಾತೆಗೆ ಪಾವತಿಸಬೇಕಾಗಿರುತ್ತದೆ. ಆದರೆ ಸದರಿ ಪ್ರಕರಣದಲ್ಲಿ ಮೃತ ವ್ಯಕ್ತಿಯ ಕುಟುಂಬಸ್ಥರು ಕೂಲಿ ಕಾರ್ಮಿಕರಾಗಿದ್ದು, ಇವರಿಗೆ ಆಧಾರ ಕಾರ್ಡ್ ಹಾಗೂ ಯಾವುದೇ ಬ್ಯಾಂಕ್ ಖಾತೆ ಇಲ್ಲದ ಕಾರಣ ಪ್ರಸ್ತುತ ದಯಾತ್ಮಕ ಧನ ಪಾವತಿಸುವುದು ಬಾಕಿ ಇರುತ್ತದೆ. ಮೇಲಿನ ಎರಡು ಪ್ರಕರಣಗಳನ್ನು ಹೊರತುಪಡಿಸಿ ಇತರೆ ಪ್ರಕರಣಗಳಲ್ಲಿ ಕೂಡಲೇ ಪರಿಹಾರ ವಿತರಣೆ ಮಾಡಲಾಗಿರುತ್ತದೆ.

ಸಂಖ್ಯೆ: ಅಪಜೀ 140 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು